ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು - 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 27-10-2016

# ಪತ್ರಿಕಾ ಆಮಂತ್ರಣ

1) ಬೆಂಗಳೂರು ಅಂತಾರಾಷ್ಟ್ರೀಯ ವಸ್ತು ಪ್ರದರ್ಶನ ಆವರಣದಲ್ಲಿ ನವೆಂಬರ್ 14 ಮತ್ತು 15 ರಂದು ನಡೆಯಲಿರುವ "ಬಿಗ್‌ಥಿಂಕ್ 2016" ಕಾರ್ಯಕ್ರಮದಲ್ಲಿ 4000 ಮಹಿಳಾ ಉದ್ಯಮಿಗಳು ಭಾಗವಹಿಸುವ ಕಾರ್ಯಕ್ರಮದ ಬಗ್ಗೆ ಬೃಹತ್ ಕೈಗಾರಿಕೆ ಸಚಿವ ಶ್ರೀ ಆರ್.ವಿ. ದೇಶಪಾಂಡೆ ಅವರು ಪರಿಶೀಲನೆ ನಡೆಸಲಿದ್ದಾರೆ.

ದಿನಾಂಕ: 28-10-2016

ಸದರಿ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆದೊಯ್ಯಲು ಅಂದು ಬೆಳಿಗ್ಗೆ 7-00 ಗಂಟೆಗೆ ಕರ್ನಾಟಕ ಉದ್ಯೋಗ ಮಿತ್ರ, ಖನಿಜ ಭವನ, ಬೆಂಗಳೂರು ಇಲ್ಲಿಂದ ವಾಹನ ಹೊರಡಲಿದೆ.

2) "ರಾಷ್ಟ್ರೀಯ ಏಕತಾ ದಿವಸ"

ದಿವಂಗತ ಸರ್ದಾರ್ ವಲ್ಲಭಬಾಯ್ ಪಟೇಲ್ ಜನ್ಮದಿನದ ಪ್ರಯುಕ್ತ
ಪ್ರತಿಜ್ಞೆ ಬೋಧನೆ: ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ದಿನಾಂಕ: 28-10-2016 ಶುಕ್ರವಾರ, ಬೆಳಿಗ್ಗೆ 11-00 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 334, ಮೂರನೇ ಮಹಡಿ, ಸಮ್ಮೇಳನ ಸಭಾಂಗಣ, ವಿಧಾನ ಸೌಧ, ಬೆಂಗಳೂರು

3) ಭೋವಿ ಮತ್ತು ವಡ್ಡರ್ ಸಮುದಾಯಗಳಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರವನ್ನು ನೀಡದಿರುವುದರಿಂದ ಅವರುಗಳು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಪರಿಶೀಲಿಸಲು ಉಗ್ರಪ್ಪ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ವಿಶೇಷ ಸದನ ಸಮಿತಿಯಿಂದ ಸಭಾಪತಿಯವರಿಗೆ ವರದಿ ಸಲ್ಲಿಕೆ:
ದಿನಾಂಕ: 28-10-2016 ಶುಕ್ರವಾರ, ಬೆಳಿಗ್ಗೆ 11-10 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 117, ಮೊದಲನೆ ಮಹಡಿ, ವಿಧಾನಸೌಧ, ಬೆಂಗಳೂರು.

# ಮಾಧ್ಯಮ ಪ್ರತಿನಿಧಿಗಳ ಗಮನಕ್ಕೆ

ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)

ಕಾರ್ಯನಿರತ ಪತ್ರಕರ್ತರು ಮತ್ತು ಅವರ ಕುಟುಂಬ ವರ್ಗದವರಿಗೆ 'ರಾಜೀವ್ ಆರೋಗ್ಯ ಭಾಗ್ಯ' ಯೋಜನೆಯನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದ್ದು, ಈ ಯೋಜನೆಯಡಿ ಗಂಭೀರ ಕಾಯಿಲೆಗಳಿಂದ ಬಳಲುತ್ತಿರುವ ಎ.ಪಿ.ಎಲ್ ಕಾರ್ಡ್ ಹೊಂದಿರುವ ಪತ್ರಕರ್ತರ ಕುಟುಂಬದ ಸದಸ್ಯರುಗಳಿಗೆ ನೋಂದಾಯಿತ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ಒದಗಿಸಲಾಗುವುದು.

ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಮಾನ್ಯತೆ ಪಡೆದ ಪತ್ರಕರ್ತರು ಹಾಗೂ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳ ಪ್ರತಿನಿಧಿಗಳು ಮತ್ತು ವಿದ್ಯುನ್ಮಾನ ವಾಹಿನಿಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರಿಂದ ಅರ್ಜಿ ಮತ್ತು ದಾಖಲಾತಿಗಳನ್ನು ಆಹ್ವಾನಿಸಲಾಗಿದೆ.

www.karnatakavarthe.org ವೆಬ್‌ಸೈಟ್‌ನಲ್ಲಿ ಅರ್ಜಿ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು, ಭರ್ತಿಮಾಡಿ ಅರ್ಜಿಯಲ್ಲಿ ನಮೂದಿಸಲಾಗಿರುವ ಎಲ್ಲಾ ದಾಖಲಾತಿಗಳನ್ನು ಲಗತ್ತಿಸಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಗೆ 15 ನವೆಂಬರ್ 2016 ರೊಳಗಾಗಿ ತಲುಪಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು, ಸುದ್ದಿ ಮತ್ತು ಪತ್ರಿಕಾ ಶಾಖೆ, ದೂರವಾಣಿ ಸಂಖ್ಯೆ 080 – 22028034 ಸಂಪರ್ಕಿಸಬಹುದಾಗಿದೆ.

## ಪತ್ರಿಕಾ ಪ್ರಕಟಣೆ

## ಮುಖ್ಯಮಂತ್ರಿಗಳಿಂದ "ರಾಷ್ಟ್ರೀಯ ಏಕತಾ ದಿವಸ" ಪ್ರತಿಜ್ಞೆ ಬೋಧನೆ

ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)

"ರಾಷ್ಟ್ರೀಯ ಏಕತಾ ದಿವಸ" ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಕ್ಟೋಬರ್ 28 ರಂದು ಬೆಳಿಗ್ಗೆ 11–00 ಗಂಟೆಗೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸರ್ಕಾರದ ಸಚಿವಾಲಯದ ಎಲ್ಲಾ ಅಧಿಕಾರಿಗಳು ಹಾಗೂ ನೌಕರರಿಗೆ ಪ್ರತಿಜ್ಞೆಯನ್ನು ಬೋಧಿಸಲಿದ್ದಾರೆ.

ದಿವಂಗತ ಸರ್ದಾರ್ ವಲ್ಲಭಬಾಯ್ ಪಟೇಲ್‌ರವರ ಜನ್ಮದಿನದ ಪ್ರಯುಕ್ತ ಅಕ್ಟೋಬರ್ 28 ರಂದು "ರಾಷ್ಟ್ರೀಯ ಏಕತಾ ದಿವಸ" ವನ್ನಾಗಿ ಆಚರಿಸಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರದ ಸಚಿವಾಲಯದ ಎಲ್ಲಾ ಅಧಿಕಾರಿಗಳು ಹಾಗೂ ನೌಕರರು ತಪ್ಪದೇ ಅಂದು ಸಮ್ಮೇಳನ ಸಭಾಂಗಣದಲ್ಲಿ ಬೆಳಿಗ್ಗೆ 10:30 ರೊಳಗೆ ಹಾಜರಾಗುವಂತೆ ಸಿಬ್ಬಂದಿ ಆಡಳಿತ ಸುಧಾರಣಾ ಇಲಾಖೆ ಪ್ರಕಟಣೆ ತಿಳಿಸಿದೆ.

ಜೆಡಿ:ಜಿಪಿಆರ್.

# ಗುಟ್ಕಾ ಹಾಗೂ ಪಾನ್‌ಮಸಾಲ ಮಾರಾಟಕ್ಕೆ ಕಡಿವಾಣ

ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)

ನಿಕೋಟಿನ್ ಮತ್ತು ತಂಬಾಕು ಅಂಶವಿರುವ ಗುಟ್ಕಾ ಹಾಗೂ ಪಾನ್ ಮಸಾಲಾವನ್ನು ರಾಜ್ಯದಲ್ಲಿ ಇನ್ನು ಮುಂದೆ ಪ್ರತ್ಯೇಕ ಪ್ಯಾಕೆಟ್‌ಗಳಾಗಿ ಮಾರಾಟ ಮಾಡುವಂತಿಲ್ಲ ಎಂದು ಆಹಾರ ಸಂರಕ್ಷಣಾ ಆಯುಕ್ತರು ಆದೇಶ ಹೊರಡಿಸಿದ್ದಾರೆ.

ಆದರೆ ತಂಬಾಕು ಮತ್ತು ನಿಕೋಟಿನ್ ಆಂಶವಿಲ್ಲದ ಅಡಿಕೆ ಮಾರಾಟಕ್ಕೆ ಯಾವುದೇ ಅಡ್ಡಿ ಇಲ್ಲ. 2013 ರ ಮೇ 30 ರಿಂದಲೇ ಸುಪ್ರೀಂಕೋರ್ಟ್ ಹಾಗೂ ಕೇಂದ್ರ ಸರಕಾರದ ಸೂಚನೆಯಂತೆ ರಾಜ್ಯದಲ್ಲಿ ಅಧಿಕೃತವಾಗಿ ಗುಟ್ಕಾ ನಿಷೇಧಿಸಲಾಗಿದೆ. ಆದರೂ ತಂಬಾಕು, ನಿಕೋಟಿನ್ ಅಂಶವಿರುವ ಗುಟ್ಕಾ ಹಾಗೂ ಪಾನ್ ಮಸಾಲಾವನ್ನು ಪ್ರತ್ಯೇಕ ಪ್ಯಾಕೆಟ್‌ಗಳಲ್ಲಿ ವಿವಿಧ ಹೆಸರಿನಲ್ಲಿ ಮಾರಾಟ ಮಾಡಲಾಗುತ್ತಿರುವುದು ಕಂಡು ಬಂದಿದೆ.

ಬೇರೆ ಬೇರೆ ಹೆಸರಿನಲ್ಲಿ ಅಥವಾ ಅಂತಿಮ ಉತ್ಪನ್ನ ರೂಪದಲ್ಲಿ ಮಾರಾಟ ಮಾಡದಂತೆ ನೋಡಿಕೊಳ್ಳಬೇಕು ಎಂದು ಆಹಾರ ಸುರಕ್ಷರಾ ಆಯುಕ್ತರು ಎಲ್ಲ ಜಿಲ್ಲಾಧಿಕಾರಿಗಳು, ನಿಯೋಜಿತ ಅಧಿಕಾರಿಗಳು ಮತ್ತು ಆಹಾರ ಸುರಕ್ಷತಾ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಇದರಿಂದಾಗಿ ಜಗಿಯುವ ತಂಬಾಕನ್ನು ರಾಜ್ಯದಲ್ಲಿ ಸಂಪೂರ್ಣ ನಿಷೇಧಿಸಬೇಕೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಆಯುಕ್ತರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೆಡಿ:ಜಿಪಿಆರ್.

# ಖಾಸಗಿ ವೈದ್ಯಕೀಯ ಸಂಸ್ಥೆಗಳಲ್ಲಿ ರೋಗಿಗಳು ಎದುರಿಸುತ್ತಿರುವ ಸಮಸ್ಯೆಗಳ ಪರಿಹಾರಕ್ಕೆ ಸಮಿತಿ ರಚನೆ: ಸಚಿವ ರಮೇಶ್ ಕುಮಾರ್

ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)

ಖಾಸಗಿ ವೈದ್ಯಕೀಯ ಸಂಸ್ಥೆಗಳಲ್ಲಿ ರೋಗಿಗಳು ಎದುರಿಸುತ್ತಿರುವ ಸಮಸ್ಯೆಗಳನ್ನು ವಿಮರ್ಶಿಸಿ ಅವರ ಅಹವಾಲುಗಳನ್ನು ಪರಿಹರಿಸಲು ನಿವೃತ್ತ ಮುಖ್ಯ ನ್ಯಾಯಮೂರ್ತಿ ವಿಕ್ರಮ್‌ಜಿತ್ ಸೇನ್ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್‌ಕುಮಾರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ಕರೆಯಲಾಗಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು ಸಮಿತಿಯಲ್ಲಿ ಸರ್ಕಾರಿ ಸೇವೆಯಲ್ಲಿರುವ ನುರಿತ ಹಿರಿಯ ವೈದ್ಯರುಗಳು, ಪ್ರತಿಷ್ಠಿತ ಖಾಸಗಿ ಆಸ್ಪತ್ರೆಗಳ ಪ್ರತಿನಿಧಿಗಳು, ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳು, ನಿವೃತ್ತ ಅಧಿಕಾರಿಗಳು ಹಾಗೂ ಕಾನೂನು ತಜ್ಞರುಗಳು ಇರಲಿದ್ದು ಈ ಸಮಿತಿಯು ಎಂಟು ವಾರಗಳಲ್ಲಿ ಸರ್ಕಾರಕ್ಕೆ ವರದಿ ನೀಡಲಿದೆ ಎಂದರು.

ಖಾಸಗಿ ಆಸ್ಪತ್ರೆಗಳು ರೋಗಿಗಳಿಂದ ದುಬಾರಿ ಹಣ ಪಡೆಯುವುದಕ್ಕೆ ತಪ್ಪಿಸುವ ಸಂಬಂಧ ಪ್ರತಿ ಚಿಕಿತ್ಸೆಗೆ ಎಷ್ಟು ಹಣ ಖರ್ಚಾಗಲಿದೆ ಎಂಬ ಬಗ್ಗೆ ದರಪಟ್ಟಿ ಪ್ರಕಟಿಸುವುದನ್ನು ಕಡ್ಡಾಯವಾಗಿ ಮಾಡಲಾಗುವುದು ಹಾಗೂ ವೈದ್ಯರ ಖರ್ಚು ವೆಚ್ಚದ ಬಗ್ಗೆ ರೋಗಿಗಳಿಗೆ ತಿಳಿಸುವುಂತೆಯು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ ಅವರು ಈ ಎಲ್ಲಾ ಅಂಶಗಳನ್ನೊಳಗೊಂಡಂತೆ ಈಗಿರುವ ಕಾಯ್ದೆಗೆ ತಿದ್ದುಪಡಿ ತರಲು ಚಿಂತಿಸಲಾಗಿದೆ ಎಂದರು.

ಸಾರ್ವಜನಿಕರಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆ ಮೊದಲು ಲಭ್ಯವಾಗಬೇಕು ನಂತರ ಹಣ ನೀಡುವಂತಾಗಬೇಕು ಎಂದು ತಿಳಿಸಿದ ಸಚಿವರು ರಾಜ್ಯದಲ್ಲಿ ಗುಟ್ಕಾ ರದ್ದುಪಡಿಸಿದ ಬಳಿಕ ಅಡಿಕೆ ಮತ್ತು ತಂಬಾಕು ಪ್ರತ್ಯೇಕ ಪ್ಯಾಕ್‌ಗಳಲ್ಲಿ ಮಾರಾಟವಾಗುತ್ತಿವೆ. ನ್ಯಾಯಾಲಯದ ಇದನ್ನು ಗಮನಿಸಿ ಅಗಿಯುವ ತಂಬಾಕು ನಿಷೇಧಿಸುವಂತೆ ಸೂಚಿಸಿದ ಇಂತಹ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಮಾರಾಟ ಮಾಡುವವರ ಮೇಲೆ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

## ಆರೋಗ್ಯ ಇಲಾಖೆಗೆ ಹೊಸ ಕಾಯಕಲ್ಪ

ಆರೋಗ್ಯ ಇಲಾಖೆಯಲ್ಲಿ ಸೇವೆಯಲ್ಲಿದ್ದು ನಿರಂತರ ಗೈರುಹಾಜರಾಗಿರುವ 804 ವೈದ್ಯರು ಹಾಗೂ 2733 ಸಿಬ್ಬಂದಿಗಳನ್ನು ಸೇವೆಯಿಂದ ವಜಾಮಾಡಲಾಗುವುದು ಎಂದ ಆರೋಗ್ಯ ಸಚಿವರು ರಾಜ್ಯದಲ್ಲಿ ತಜ್ಞ ವೈದ್ಯರ ಕೊರತೆ ನೀಗಿಸಲು ಸರ್ಕಾರಿ ಸೇವೆಯಲ್ಲಿರುವ ಪದವೀಧರ ವೈದ್ಯರುಗಳಿಗೆ ಸ್ನಾತಕೋತ್ತರ ಡಿಪ್ಲೋಮ ವೈದ್ಯಕೀಯ ಕೋರ್ಸುಗಳನ್ನು ಅಧ್ಯಯನ ಮಾಡಲು ಸ್ನಾತಕೋತ್ತರ ತರಗತಿಗಳನ್ನು ಪ್ರಾರಂಭಿಸಲಾಗುವುದು. ಪದವಿ ಪಡೆದ ವೈದ್ಯರು ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸುವಂತೆ ಆದೇಶ ನೀಡಲಾಗುವುದು

ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ 299 ವೈದ್ಯರ ಹುದ್ದೆಗಳನ್ನು ಡಿಸೆಂಬರ್ ಒಳಗಾಗಿ ಭರ್ತಿಮಾಡಲಾಗುವುದು ಹಾಗೂ ಖಾಲಿ ಇರುವ ಅರೆ ವೈದ್ಯಕೀಯ ಹುದ್ದೆಗಳು ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಗ್ರೂಪ್ 'ಡಿ' ನೌಕರರ ಹುದ್ದೆಗಳನ್ನು ಭರ್ತಿಮಾಡಲಾಗುವುದು. ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಜನವರಿ ತಿಂಗಳಲ್ಲಿ ತೀವ್ರ ನಿಗಾ ಘಟಕಗಳನ್ನು ಆರಂಭಿಸಲು ನಿರ್ಧರಿಸಲಾಗಿದೆ. ಮೂರು ಹಾಸಿಗೆಗಳುಳ್ಳ ಒಂದು ಘಟಕಕ್ಕೆ 27 ಲಕ್ಷ ರೂ ವೆಚ್ಚ ತಗಲಲಿದ್ದು ಈ ಪೈಕಿ 15 ಲಕ್ಷ ರೂ. ಶಾಸಕರ ನಿಧಿಯಿಂದ 5 ಲಕ್ಷ ರೂ. ಸಂಸದರ ನಿಧಿಯಿಂದ ಉಳಿದ ಹಣವನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಭರಿಸಲಾಗುವುದು ಎಂದರು.

ರಾಜ್ಯದಲ್ಲಿ ಅನೇಕ ಭಾಗಗಳಲ್ಲಿ ಚಿಕನ್‌ಗುನ್ಯಾ ಹಾಗೂ ಡೆಂಗ್ಯೂ ಪ್ರಕರಣಗಳು ಹೆಚ್ಚುತ್ತಿದ್ದು ರೋಗಿಗಳಿಗೆ ಅಗತ್ಯವಾದ ರಕ್ತಕಣಗಳನ್ನು ಪೂರೈಸುವ ಸಂಬಂಧ ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ರಕ್ತನಿಧಿ ಕೇಂದ್ರಗಳನ್ನು ಆರಂಭಿಸಲಾಗುವುದು. ಸರ್ಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿರುವ ಅಗತ್ಯ ಪರಿಕರಗಳನ್ನು ತ್ವರಿತವಾಗಿ ಪೂರೈಕೆ ಮಾಡಲು ನಿರ್ಧರಿಸಲಾಗಿದೆ ಎಂದರು.

ರಾಜ್ಯದಲ್ಲಿರುವ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ಉಪಹಾರಕೇಂದ್ರ, ಶುದ್ಧ ಕುಡಿಯುವ ನೀರಿನ ಘಟಕ, ಹಾಪ್‌ಕಾಮ್ಸ್ ಕೇಂದ್ರಗಳನ್ನು ಪ್ರಾರಂಭಿಸಲು ಈಗಾಗಲೇ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ರೋಗಿಗಳ ಶಸ್ತ್ರ ಚಿಕಿತ್ಸೆಗೆ ಅನುಕೂಲವಾಗುವಂತೆ ಆಸ್ಪತ್ರೆಗಳಲ್ಲಿ ಕ್ಷೌರಿಕ ಕೇಂದ್ರ ಪ್ರಾರಂಭಿಸಲಾಗುವುದು, ಈ ಕ್ಷೌರಿಕ ಕೇಂದ್ರಗಳ ಸೌಲಭ್ಯ ಆಸ್ಪತ್ರೆಯ ರೋಗಿಗಳ ಅನುಕೂಲಕ್ಕಾಗಿ ಮಾತ್ರ ಎಂದು ಸಚಿವರು ಸ್ಪಷ್ಟಪಡಿಸಿದರು.

ಆಸ್ಪತ್ರೆಗಳಲ್ಲಿ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಶವಾಗಾರ ಸೌಲಭ್ಯ ಒದಗಿಸಲಾಗುವುದು. ಹುಬ್ಬಳ್ಳಿಯಲ್ಲಿ ಇಲಾಖೆಯಿಂದ ಈಗಾಗಲೇ ಆರೋಗ್ಯ ಸಹಾಯವಾಣಿ ಕೇಂದ್ರ ಪ್ರಾರಂಭಿಸಲಾಗಿದ್ದು ಸದ್ಯದಲ್ಲೇ ಅದೇ ಮಾದರಿಯಲ್ಲಿ ಬೆಂಗಳೂರಿನಲ್ಲಿ ಮತ್ತೊಂದು ಕೇಂದ್ರ ಸ್ಥಾಪಿಸಲಾಗುವುದು. ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ದಾಖಲಿಸಲು

ವ್ಯಾಟ್ಸ್‌ಅಪ್ ಯೋಜನೆ ಜಾರಿಗೆ ತಂದಿದ್ದು ಮೊಬೈಲ್ ದೂರವಾಣಿ ಸಂಖ್ಯೆ 9535811104 ಕ್ಕೆ ದೂರವಾಣಿ ಕರೆ ಮಾಡಿ ತಮ್ಮ ದೂರು ದಾಖಲಿಸಬಹುದು ಎಂದರು.

ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಡಯಾಲಿಸಿಸ್ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಈಗಾಗಲೇ 20 ಜಿಲ್ಲಾ ಆಸ್ಪತ್ರೆಗಳು ಹಾಗೂ 148 ತಾಲ್ಲೂಕು ಆಸ್ಪತ್ರೆಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಪಿ ಪಿ ಪಿ ಮಾದರಿಯಲ್ಲಿ 4 ಹಾಸಿಗೆಗಳ ಡಯಾಲಿಸಿಸ್ ಘಟಕಗಳನ್ನು ಸ್ಥಾಪಿಸಲು ಟೆಂಡರ್ ಕರೆಯಲಾಗಿದೆ. ರೋಗಿಗಳಿಗೆ ಅನುಕೂಲವಾಗುವಂತೆ ಪ್ರತಿ 15 ಕಿ.ಮಿ. ವ್ಯಾಪ್ತಿಯಲ್ಲಿ ಅಂಬ್ಯುಲೆನ್ಸ್ ಸೌಲಭ್ಯ ಕಲ್ಪಿಸಲಾಗುವುದು. ಇನ್ನೂ ಮುಂದೆ ಆಸ್ಪತ್ರೆಗಳ ಬೇಡಿಕೆಗೆ ಅನುಗುಣವಾಗಿ ಆನ್‌ಲೈನ್ ಮೂಲಕ ಔಷಧಿಗಳನ್ನು ಸರಬರಾಜು ಮಾಡಲು ಕ್ರಮಕೈಗೊಳ್ಳಲಾಗುವುದು, ಜನರಿಕ್ ಔಷಧಿ ಮಳಿಗೆ ಪ್ರಾರಂಭಿಸಲು ಈಗಾಗಲೆ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್, ಆಯುಕ್ತರಾದ ರತನ್‌ಕೆಲ್‌ಕರ್ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಜರಿದ್ದರು.

ಜೆಡಿ:ಜಿಪಿಆರ್.

## ಕರ್ನಾಟಕ ರಾಜ್ಯದಲ್ಲಿನ 2016ರ ಬರ ಪರಿಸ್ಥಿತಿ ಹಾಗೂ ಪ್ರವಾಹ ಪರಿಸ್ಥಿತಿ ಬಗ್ಗೆ ಕೇಂದ್ರ ಕೃಷಿ ಸಚಿವ ರಾಧಾ ಮೋಹನ ಸಿಂಗ್ ಅವರಿಗೆ ವರದಿ ಸಲ್ಲಿಕೆ

ನವದೆಹಲಿ. ಅ.27 (ಕರ್ನಾಟಕ ವಾರ್ತೆ): ರಾಜ್ಯದ ಕಂದಾಯ ಸಚಿವ ಶ್ರೀ ಕಾಗೋಡು ತಿಮ್ಮಪ್ಪ ಹಾಗೂ ಕೃಷಿ ಸಚಿವ ಶ್ರೀ ಕೃಷ್ಣ ಬೈರೇಗೌಡ ಅವರು ಕೇಂದ್ರ ಕೃಷಿ ಸಚಿವರಾದ ಶ್ರೀ ರಾಧಾ ಮೋಹನ್ ಸಿಂಗ್ ಅವರನ್ನು ನವದೆಹಲಿಯಲ್ಲಿಂದು ಭೇಟಿ ಮಾಡಿ ಕರ್ನಾಟಕ ರಾಜ್ಯದಲ್ಲಿನ 2016ರ ಬರ ಪರಸ್ಥಿತಿ ಹಾಗೂ ಪ್ರವಾಹ ಪರಿಸ್ಥಿತಿ ಕುರಿತು ವರದಿ ಸಲ್ಲಿಸಿದರು.

### <u>ಬರ ಪರಿಸ್ಥಿತಿ</u>

- ಕರ್ನಾಟಕ ರಾಜ್ಯವು ಕಳೆದ 6 ವರ್ಷಗಳಲ್ಲಿ ನಿರಂತರವಾಗಿ ಬರ, ಪ್ರವಾಹ, ಆಲಿಕಲ್ಲು ಮಳೆಗೆ ತುತ್ತಾಗುತ್ತಿದೆ.
- 2015ನೇ ಸಾಲಿನಲ್ಲಿ ರಾಜ್ಯದಲ್ಲಿ ಮುಂಗಾರು ಹಾಗೂ ಹಿಂಗಾರು ಮಳೆಯ ಕೊರತೆಯಿಂದಾಗಿ ಅತ್ಯಂತ ತೀವ್ರ ಬರಪರಿಸ್ಥಿತಿ ಇತ್ತು. 2015ರ ಮುಂಗಾರು ಹಂಗಾಮಿನಲ್ಲಿ ರಾಜ್ಯದ 136 ತಾಲ್ಲೂಕುಗಳನ್ನು ಹಾಗೂ ಹಿಂಗಾರು ಹಂಗಾಮಿನಲ್ಲಿ ಉತ್ತರ ಕರ್ನಾಟಕದ 12 ಜಿಲ್ಲೆಗಳ 68 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿತ್ತು.

- 2016ರ ಮುಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾಗುವುದಾಗಿ ಹವಾಮಾನ ಇಲಾಖೆಯು ಮುನ್ಸೂಚನೆ ನೀಡಿರುತ್ತದೆ. ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದಂತೆ ಜೂನ್ ಹಾಗೂ ಜುಲೈ ತಿಂಗಳಲ್ಲಿ ಶೇ.66ರಷ್ಟು ಮಳೆಯಾಗಿರುತ್ತದೆ. ಆದರೆ ಜುಲೈ ಮತ್ತು ಆಗಸ್ಟ್ ತಿಂಗಳಲ್ಲಿ ತೀವ್ರ ಪ್ರಮಾಣದಲ್ಲಿ ಮಳೆ ಕೊರತೆ ಉಂಟಾಗಿದೆ. ಇದರಿಂದಾಗಿ ಬಿತ್ತನೆಯಾಗಿರುವ ಪ್ರದೇಶದಲ್ಲಿ ಕೃಷಿ ಬೆಳೆ ಹಾನಿಯಾಗಿರುತ್ತದೆ.
- 2016ರ ಹಿಂಗಾರು ಹಂಗಾಮಿನಲ್ಲಿ 73.00 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಬೆಳೆ ಬಿತ್ತನೆ ಗುರಿಯನ್ನು ನಿಗಧಿಪಡಿಸಲಾಗಿದೆ. ಆದರೆ 71.67 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಈ ಬಿತ್ತನೆ ಪ್ರದೇಶದಲ್ಲಿ 54.51 ಲಕ್ಷ ಹೆಕ್ಟೇರ್ ಮಳೆಯಾಶ್ರಿತ ಪ್ರದೇಶವಾಗಿದ್ದು, 17.16 ಲಕ್ಷ ಹೆಕ್ಟೇರ್ ನೀರಾವರಿ ಪ್ರದೇಶವಾಗಿದೆ.
- ಸತತ 4 ವಾರಗಳ ಶುಷ್ಕ ವಾತಾವರಣ, ಶೇ.20ಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಮಳೆ ಕೊರತೆ, ಭೂಮಿಯಲ್ಲಿ ತೇವಾಂಶ ಕೊರತೆ ಇತ್ಯಾದಿ ಕೇಂದ್ರ ಸರ್ಕಾರದ ಮಾನದಂಡಗಳನ್ನು ಪರಿಗಣನೆಗೆ ತೆಗೆದುಕೊಂಡು ರಾಜ್ಯದ 25 ಜಿಲ್ಲೆಗಳ 110 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿದೆ.
- ಬರಪೀಡಿತ ಪ್ರದೇಶವೆಂದು ಘೋಷಿಸಲಾದ 110 ತಾಲ್ಲೂಕುಗಳಲ್ಲಿ ಮಳೆಕೊರತೆ, ತೇವಾಂಶ ಕೊರತೆ ಇತ್ಯಾದಿಗಳಿಂದಾಗಿ 25.57 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ಬಿತ್ತನೆಯಾಗಿರುವ ಕೃಷಿ ಬೆಳೆಗೆ ಹಾನಿಯಾಗಿದೆ. ಹಾನಿಯ ಅಂದಾಜು ನಷ್ಟ ರೂ.11,051.33 ಕೋಟಿ. ಅದೇರೀತಿ 1.89 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ತೋಟಗಾರಿಕೆ ಬೆಳೆಯ ಹಾನಿಯಾಗಿದೆ. ಹಾನಿಯ ಅಂದಾಜು ನಷ್ಟ ರೂ.1094.46 ಕೋಟಿ.
- ಬರಪೀಡಿತ ಪ್ರದೇಶವೆಂದು ಘೋಷಿಸಲಾದ 110 ತಾಲ್ಲೂಕುಗಳ 82.45 ಲಕ್ಷ ಮೇವು ಆಧಾರಿತ ಜಾನುವಾರುಗಳಿವೆ. ರಾಜ್ಯದಲ್ಲಿ ಪ್ರಸ್ತುತ 92.15 ಲಕ್ಷ ಟನ್ ಮೇವು ಲಭ್ಯವಿರುತ್ತದೆ. ಲಭ್ಯವಿರುವ ಈ ಮೇವು ಮುಂದಿನ 19 ವಾರಗಳಿಗೆ ಮಾತ್ರ ಸಾಕಾಗುತ್ತದೆ. ಆದ್ದರಿಂದ ಜಾನುವಾರುಗಳಿಗೆ ಮುಂದಿನ ದಿನಗಳಲ್ಲಿ ಮೇವಿನ ಕೊರತೆ ಉಂಟಾಗುವ ಸಾಧ್ಯತೆ ಇದ್ದು, ಹೆಚ್ಚಿನ ಪ್ರಮಾಣದಲ್ಲಿ ಗೋಶಾಲೆ ಹಾಗೂ ಮೇವು ಬ್ಯಾಂಕ್ ತೆರೆಯುವ ಅಗತ್ಯತೆ ಇದೆ ಹಾಗೂ ಮೇವು ಬೆಳೆಸುವ ಸಲುವಾಗಿ ರೈತರಿಗೆ ಮಿನಿಕಿಟ್ ಸರಬರಾಜು ಹಾಗೂ ಮೇವು ಸಾಗಾಣಿಕೆಗಾಗಿ ಅನುದಾನದ ಅವಶ್ಯಕತೆ ಇದೆ.
- ಮಳೆ ಕೊರತೆಯಿಂದಾಗಿ ರಾಜ್ಯದಲ್ಲಿ ಅಂತರ್ಜಲ ಮಟ್ಟ ಕುಸಿದಿರುವುದರಿಂದ ಕುಡಿಯುವ ನೀರಿನ ಸರಬರಾಜಿಗೆ ತೊಂದರೆ ಉಂಟಾಗುವ ಸಾಧ್ಯತೆ ಇದೆ. ಇದರಿಂದಾಗಿ ಮುಂದಿನ ದಿನಗಳಲ್ಲಿ ಕುಡಿಯುವ ನೀರನ್ನು ಹೆಚ್ಚಿನ ಪ್ರಮಾಣದಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಟ್ಯಾಂಕರ್ ಮೂಲಕ ಸರಬರಾಜು ಮಾಡುವ ಸನ್ನಿವೇಶ ಉಂಟಾಗಲಿದೆ. ರಾಜ್ಯದಲ್ಲಿನ ತೀವ್ರ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಕೃಷಿ, ತೋಟಗಾರಿಕೆ ಬೆಳೆ ಹಾನಿಯ ಅಂದಾಜು ನಷ್ಟ ರೂ. 12,145.79 ಕೋಟಿಯಾಗಿರುತ್ತದೆ.
- ಕೃಷಿ ಬೆಳೆ ಹಾಗೂ ತೋಟಗಾರಿಕೆ ಬೆಳೆ ಹಾನಿ, ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ಜಾನುವಾರುಗಳಿಗೆ ಮೇವು ಸರಬರಾಜು, ಔಷಧಿ ಇತ್ಯಾದಿಗಳಿಗಾಗಿ ರೂ.3,375.77 ಕೋಟಿ ನೆರವು ನೀಡುವಂತೆ ಕೋರಿ ಕೇಂದ್ರ ಸರ್ಕಾರದ ಕೃಷಿ ಸಚಿವರನ್ನು ಭೇಟಿ ಮಾಡಿ ಮೆಮೊರಾಂಡಮ್ ಸಲ್ಲಿಸಲಾಗಿದೆ.
- ಕೇಂದ್ರ ಸರ್ಕಾರವು ರಾಜ್ಯದ ಬರ ಪರಿಸ್ಥಿತಿಯನ್ನು ಅಧ್ಯಯನ ಮಾಡಲು ಶ್ರೀಮತಿ ಎ. ನೀರಜಾ, ಜಂಟಿ ಕಾರ್ಯದರ್ಶಿ, ಕೃಷಿ ಮಂತ್ರಾಲಯ ಇವರ ನೇತೃತ್ವದ ಕೇಂದ್ರ ಅಧ್ಯಯನ ತಂಡವನ್ನು ರಚಿಸಿದೆ.

- ಕೇಂದ್ರ ಅಧ್ಯಯನ ತಂಡವು ರಾಜ್ಯಕ್ಕೆ ಭೇಟಿ ನೀಡಿ ಬರಪರಿಸ್ಥಿತಿಯನ್ನು ಪರಾಮರ್ಶಿಸಿ ವರದಿ ಸಲ್ಲಿಸಿದ ನಂತರ ಕೇಂದ್ರ ಸರ್ಕಾರವು ರಾಜ್ಯದ ಬರಪರಿಸ್ಥಿತಿಯನ್ನು ಎದುರಿಸಲು ಸೂಕ್ತ ನೆರವು ನೀಡುವುದಾಗಿ ನಿರೀಕ್ಷಿಸಲಾಗಿದೆ.

**ಪ್ರವಾಹ ಪರಿಸ್ಥಿತಿ:**

- ರಾಜ್ಯದ ಉತ್ತರ ಕರ್ನಾಟಕದ ಬೀದರ್, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಯ ಕೆಲವು ಪ್ರದೇಶಗಳಲ್ಲಿ 2016ರ ಸೆಪ್ಟೆಂಬರ್ ತಿಂಗಳಲ್ಲಿ ಬಿದ್ದಿರುವ ಅಕಾಲಿಕ ಮಳೆಯಿಂದಾಗಿ ಉಂಟಾಗಿರುವ ಪ್ರವಾಹದಿಂದಾಗಿ ಜೀವಹಾನಿ, ಜಾನುವಾರು ಹಾನಿ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಿಗೆ ಹಾನಿ ಹಾಗೂ ಮೂಲಭೂತ ಸೌಲಭ್ಯಗಳಿಗೆ ಅಪಾರ ಪ್ರಮಾಣದಲ್ಲಿ ಹಾನಿಯಾಗಿದೆ. ಅದಲ್ಲದೇ ಮಹಾರಾಷ್ಟ್ರ ರಾಜ್ಯದಲ್ಲಿ ಜೂನ್ ತಿಂಗಳಲ್ಲಿ ಉಂಟಾಗಿರುವ ಮಳೆಯಿಂದಾಗಿ ಜಲಾಶಯಗಳ ನೀರನ್ನು ಬಿಟ್ಟಿರುವುದರಿಂದ ರಾಜ್ಯದ ಕೃಷ್ಣಾ ನದಿಯ ಜಲಾನಯನ ಪ್ರದೇಶವಾದ ಬೆಳಗಾವಿ, ಬಾಗಲಕೋಟೆ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಕೃಷಿ ಬೆಳೆ ಹಾಗೂ ಮೂಲಭೂತ ಸೌಲಭ್ಯಗಳಿಗೆ ಹಾನಿಯಾಗಿರುತ್ತದೆ. ಬೀದರ್, ಕಲಬುರಗಿ ಯಾದಗಿರಿ, ಬೆಳಗಾವಿ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಉಂಟಾಗಿರುವ ಪ್ರವಾಹದಿಂದಾಗಿ ಸುಮಾರು ರೂ.2485.06 ಕೋಟಿ ಕೃಷಿ ಬೆಳೆ, ತೋಟಗಾರಿಕೆ ಬೆಳೆ, ಜೀವಹಾನಿ, ಜಾನುವಾರು ಹಾನಿ ಹಾಗೂ ಮೂಲಭೂತ ಸೌಲಭ್ಯಗಳಿಗೆ ಹಾನಿಯಾಗಿರುವ ಬಗ್ಗೆ ಅಂದಾಜಿಸಲಾಗಿದೆ.
- ಕೇಂದ್ರ ಸರ್ಕಾರದ ಎಸ್‌ಡಿಆರ್‌ಎಫ್ / ಎನ್‌ಡಿಆರ್‌ಎಫ್ ಮಾರ್ಗಸೂಚಿ ಪ್ರಕಾರ ರೂ.386.44 ಕೋಟಿ ನೆರವು ನೀಡುವಂತೆ ಕೋರಿ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯಕ್ಕೆ ಮೆಮೊರಾಂಡಮ್ ಸಲ್ಲಿಸಲಾಗಿದೆ.
- ರಾಜ್ಯದಲ್ಲಿನ ಮೇಲ್ಕಂಡ ಜಿಲ್ಲೆಗಳಲ್ಲಿ ಉಂಟಾಗಿರುವ ಪ್ರವಾಹದಿಂದ ಹಾನಿಯಾಗಿರುವ ಪ್ರದೇಶಗಳನ್ನು ಭೇಟಿ ಮಾಡಿ ಪರಿಸ್ಥಿತಿಯನ್ನು ಅಧ್ಯಯನ ಮಾಡಿ ವರದಿಯನ್ನು ಸಲ್ಲಿಸಲು ಕೇಂದ್ರ ಅಧ್ಯಯನ ತಂಡವನ್ನು ಕೂಡಲೇ ರಾಜ್ಯಕ್ಕೆ ನಿಯೋಜಿಸುವಂತೆ ಕೋರಲಾಗಿದೆ.
- ಅಧ್ಯಯನ ತಂಡದ ವರದಿಯನ್ವಯ ಕೇಂದ್ರ ಸರ್ಕಾರದಿಂದ ಅನುದಾನ ನಿರೀಕ್ಷಿಸಲಾಗಿದೆ.
- 2016-17ನೇ ಸಾಲಿನಲ್ಲಿ ಬರ ಹಾಗೂ ಪ್ರವಾಹ ಪರಿಸ್ಥಿತಿಯನ್ನು ಎದುರಿಸಲು ಸರ್ಕಾರ ಕೈಗೊಂಡ ಕ್ರಮ.
    - ರಾಜ್ಯದಲ್ಲಿನ ಬರಪರಿಸ್ಥಿತಿಯ ಬಗ್ಗೆ ಈಗಾಗಲೇ ಸಚಿವ ಸಂಪುಟದ ಉಪಸಮಿತಿ ಹಾಗೂ ಸಚಿವ ಸಂಪುಟವು ಪರಿಸ್ಥಿತಿಯನ್ನು ವಿಮರ್ಶಿಸಿದೆ.
    - ಬರಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ಜಾನುವಾರು ಸಂರಕ್ಷಣೆ, ಉದ್ಯೋಗ ಸೃಜನೆ, ಕಾಮಗಾರಿಗಳನ್ನು ಕೈಗೊಂಡು ಬರಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಲಾಗಿದೆ.
    - ಪ್ರಸ್ತುತ ರಾಜ್ಯದಲ್ಲಿ 190 ಗ್ರಾಮಗಳಲ್ಲಿ 328 ಟ್ಯಾಂಕರ್ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಜನ ಜಾನುವಾರುಗಳಿಗೆ ಯಾವುದೇ ಸಂದರ್ಭದಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲು ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಲಾಗಿದೆ.
    - ರಾಜ್ಯದಲ್ಲಿ ಈಗಾಗಲೇ 17 ಮೇವು ಬ್ಯಾಂಕ್‌ಗಳು ಕಾರ್ಯ ನಿರ್ವಹಿಸುತ್ತಿದೆ. ಅಗತ್ಯತೆಗನುಗುಣವಾಗಿ ಹೆಚ್ಚುವರಿ ಮೇವುಬ್ಯಾಂಕ್ ಹಾಗೂ ಗೋಶಾಲೆ ಪ್ರಾರಂಭಿಸಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಲಾಗಿದೆ.

- 2016ರ ಸೆಪ್ಟೆಂಬರ್ ತಿಂಗಳಲ್ಲಿ ಬಿದ್ದಿರುವ ಅಕಾಲಿಕ ಮಳೆಯಿಂದಾಗಿ ಉಂಟಾಗಿರುವ ಪ್ರವಾಹದಿಂದಾಗಿ ಬೀದರ್ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ತ್ವರಿತವಾಗಿ ಪ್ರವಾಹ ಪರಿಹಾರ, ಕೆಲಸ ಕಾರ್ಯಗಳನ್ನು ನಿರ್ವಹಿಸಲು ಬೀದರ್ ಜಿಲ್ಲೆಗೆ ರೂ.50.00 ಕೋಟಿ ಹಾಗೂ ಕಲಬುರಗಿ ಜಿಲ್ಲೆ ರೂ.25.00 ಕೋಟಿಯನ್ನು ಬಿಡುಗಡೆ ಮಾಡಲಾಗಿದೆ.
- ರಾಜ್ಯ ಸರ್ಕಾರವು ಎಸ್‌ಡಿಆರ್‌ಎಫ್ ನಿಧಿಯಿಂದ ಈಗಾಗಲೇ ಕುಡಿಯುವ ನೀರಿನ ವ್ಯವಸ್ಥೆ, ಮೇವು ವ್ಯವಸ್ಥೆ ಪ್ರವಾಹ ಇತ್ಯಾದಿಗಳಿಗಾಗಿ ರೂ.374.50 ಕೋಟಿ ಬಿಡುಗಡೆ ಮಾಡಿದೆ.